**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಪ್ರಾಥಮಿಕ ಮಹಿಳಾ ಶಿಕ್ಷಕರಿಗೆ ಶಿಶುಪಾಲನಾ ರಜೆ ಮಂಜೂರಾತಿ ಬಗ್ಗೆ ಸ್ಪಷ್ಟೀಕರಣ ನೀಡುವ ಬಗ್ಗೆ.

**ಓದಲಾಗಿದೆ:** ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಸಿ3(5)/ಪ್ರಾ.ಶಿ/ಸ.ಪ್ರಾ.ಶಾ.ಶಿ.ಮನವಿ/01/2020-21, ದಿನಾಂಕ:06/08/2021

* * *

**ಪ್ರಸ್ತಾವನೆ:**

ಮೇಲೆ ಓದಲಾದ ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪ್ರಸ್ತಾವನೆಯಲ್ಲಿ, ಬುದ್ಧಿ ಮಾಂದ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಶಿಶುಪಾಲನ ರಜೆಯನ್ನು ಈಗಾಗಲೇ ಸರ್ಕಾರವು ಮಂಜೂರು ಮಾಡಿದೆ. ಹಾಗೆಯೇ 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-37 ರಲ್ಲಿ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಚಾಲ್ತಿಯಲ್ಲಿರುವ ಪ್ರಸೂತಿ ರಜೆಯೊಂದಿಗೆ ಒಟ್ಟು ಸೇವಾವಧಿಯಲ್ಲಿ ಆರು ತಿಂಗಳವರೆಗೆ ಅಂದರೆ 180 ದಿನಗಳ ಶಿಶುಪಾಲನ ರಜೆಯನ್ನು ಸರ್ಕಾರಿ ಆದೇಶ ಸಂಖ್ಯೆ:ಆಇ 4(ಇ)ಸೇನಿಸೇ 2021 ಬೆಂಗಳೂರು, ದಿನಾಂಕ:21-06-2021 ಶಿಶುಪಾಲನ ರಜೆಯ ಮಂಜೂರು ಮಾಡಲಾಗಿರುತ್ತದೆ.

ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಶಿಕ್ಷಕರುಗಳಿಗೆ ಶಿಶುಪಾಲನ ರಜೆ ಮಂಜೂರು ಮಾಡಲು ಗೊಂದಲಗಳಿರುವುದರಿಂದ, ಜಿಲ್ಲಾ ಉಪ ನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಹಾಗೂ ಸರ್ಕಾರಿ ನೌಕರರ ಸಂಘ/ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಗಳಿಂದ ಸ್ಪಷ್ಟೀಕರಣ ನೀಡುವಂತೆ ಕೋರಿಕೆಗಳು ಸ್ವೀಕೃತವಾಗುತ್ತಿದ್ದು, ಸದರಿ ಸ್ಪಷ್ಟೀಕರಣ ಅವಶ್ಯಕತೆ ಇರುವ ಅಂಶಗಳನ್ನು ಸಂಕ್ಷಿಪ್ತವಾಗಿ ವಿವರಿಸಿರುತ್ತಾರೆ.

| ಕ್ರ.ಸಂ | ಸರ್ಕಾರದ ಆದೇಶದಲ್ಲಿ ವಿಧಿಸಿರುವ ಷರತ್ತು | ಸ್ಪಷ್ಟೀಕರಣ ಕೋರಿರುವ ಅಂಶಗಳು |
|---|---|---|
| VI | ಸರ್ಕಾರದ ಆದೇಶದಲ್ಲಿ ವಿಧಿಸಿರುವ ಷರತ್ತುಗಳು:-(VI) ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 | ಸದರಿ ಆದೇಶವು ಎಲ್ಲಾ ಸರ್ಕಾರಿ ಮಹಿಳಾ ನೌಕರರಿಗೂ ಅನ್ವಯವಾಗುವುದೇ ಎಂಬ ಬಗ್ಗೆ ಸ್ಪಷ್ಟೀಕರಣ ನೀಡುವುದು. |

Scanned with CamScanner

| | | |
|---|---|---|
| | ದಿನಗಳ ಶಿಶುಪಾಲನ ರಜೆ ಸೌಲಭ್ಯಕ್ಕೆ ಅರ್ಹರಾದ ಯಾವುದೇ ನೌಕರಳು ಈ ಯೋಜನೆಯಡಿಯಲ್ಲಿನ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದಲ್ಲ. | |
| (IX) | ಈ ರಜೆಯನ್ನು ಮಂಜೂರು ಮಾಡುವ ಸಕ್ಷಮ ಪ್ರಾಧಿಕಾರವು ಶಿಶುಪಾಲನಾ ರಜೆ ಮಂಜೂರಾತಿಯನ್ನು ಸೇವಾ ಮಸ್ತಕದಲ್ಲಿ ದಾಖಲು ಮಾಡುವುದು. ಮತ್ತು ನಿಗಧಿತ ನಮೂನೆಯಲ್ಲಿ ಲೆಕ್ಕವಿಡಬೇಕು. (ವಿಶೇಷ ಮಕ್ಕಳ ಶಿಶುಪಾಲನಾ ರಜೆಯ ಲೆಕ್ಕವನ್ನಿಡುವ ಪ್ರ-ಪತ್ರದ ಮಾದರಿಯಲ್ಲಿ) ಎಂದು ಇರುತ್ತದೆ. | ಆದರೆ, ನಿರ್ದೇಶಕರು, ಸದರಿ ರಜೆಯು ವಿಶೇಷ ಚೇತನ ಮಕ್ಕಳನ್ನು ಹೊಂದಿರುವ ಶಿಕ್ಷಕರಿಗೆ ಅನ್ವಯವಾಗುವುದೇ ಅಥವಾ ರಾಜ್ಯದ ಎಲ್ಲಾ ಅರ್ಹ ಮಹಿಳಾ ಶಿಕ್ಷಕರಿಗೆ ಅನ್ವಯವಾಗುವುದೇ. ಎಂಬ ಬಗ್ಗೆ ಸ್ಪಷ್ಟೀಕರಣ ಕೋರಿರುತ್ತಾರೆ. |
| – | ರಾಜ್ಯದ ಎಲ್ಲಾ ಮಹಿಳಾ ಸರ್ಕಾರಿ ನೌಕರರಿಗೆ ಮಂಜೂರು ಮಾಡಿರುವುದರಿಂದ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು ರಜೆ ಇಲಾಖೆಯೆಂದು ವರ್ಗೀಕರಣವಾಗಿದೆ. | ಶಿಕ್ಷಣ ಇಲಾಖೆಯಲ್ಲಿನ ಶಿಕ್ಷಕರು, ಈಗಾಗಲೇ ದಸರಾ ಮತ್ತು ಬೇಸಿಗೆ ರಜೆಯನ್ನು ಪಡೆಯುತ್ತಿದ್ದಾರೆ. ಹಾಗೂ ಇಲಾಖೆಯಲ್ಲಿ ಶೇ.50ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಶಿಕ್ಷಕರು ಕರ್ತವ್ಯ ನಿರ್ವಹಿಸುತ್ತಿದ್ದು, ಒಂದೇ ಶಾಲೆಯಲ್ಲಿ ಒಬ್ಬರಿಗಿಂತ ಹೆಚ್ಚಿನ ಶಿಕ್ಷಕಿಯರು ಶಿಶುಪಾಲನಾ ರಜೆ ಮಂಜೂರಾತಿ ಕೋರಿ ಮನವಿ ಸಲ್ಲಿಸಿದಲ್ಲಿ/ಮಂಜೂರು ಮಾಡಿದಲ್ಲಿ ಶೈಕ್ಷಣಿಕ ಕೆಲಸ ಕಾರ್ಯಗಳಿಗೆ ಅಡಚಣೆಯಾಗುವ ಸಾಧ್ಯತೆಗಳಿವೆ ಆದ್ದರಿಂದ ಈ ಆದೇಶವು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಅನ್ವಯಿಸುವುದೇ |

ಸರ್ಕಾರದ ಆದೇಶ ಸಂಖ್ಯೆ:ಆಇ 1 ಸೇನಿಸೇ 2011 ದಿನಾಂಕ:29-06-2011 ರಲ್ಲಿ ಬುದ್ಧಿಮಾಂಧ್ಯ/ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ವೈದ್ಯಕೀಯ ಮಂಡಳಿಯ ಪ್ರಮಾಣ ಪತ್ರದ ಆಧಾರದ ಮೇಲೆ ಕೆಲವು ಷರತ್ತಿಗೊಳಪಟ್ಟು ಒಂದು ವರ್ಷದಲ್ಲಿ ಮೂರು ಕಂತುಗಳಿಗೆ ಮೀರದಂತೆ ಹಾಗೂ 15 ದಿನಗಳಿಗೆ ಕಡಿಮೆ ಇಲ್ಲದಂತೆ ಇಡೀ ಸೇವಾವಧಿಯಲ್ಲಿ ಎರಡು ವರ್ಷಗಳ ಅವಧಿಗೆ ಅಂದರೆ 730 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲಾಗಿದೆ.

Scanned with CamScanner

ರಾಜ್ಯದ ಎಲ್ಲಾ ಮಹಿಳಾ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ:ಆಇ 4(ಇ) ಸೇನಿಸೇ 2021 ಬೆಂಗಳೂರು, ದಿನಾಂಕ:21-06-2021 ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಕೆಲವೊಂದು ಷರತ್ತಿಗೊಳಪಟ್ಟು ಇಡೀ ಸೇವಾವಧಿಯಲ್ಲಿ ಗರಿಷ್ಠ 6 ತಿಂಗಳ ವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲು ಅನುಮತಿಸಲಾಗಿದೆ.

ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿರುವ ಸರ್ಕಾರಿ ಮಹಿಳಾ ನೌಕರರಿಗೆ ಮಂಜೂರು ಮಾಡಿರುವ 730 ದಿನಗಳ ಶಿಶುಪಾಲನ ರಜೆ ಸೌಲಭ್ಯಕ್ಕೆ ಅರ್ಹರಾದ ಮಹಿಳಾ ಶಿಕ್ಷಕಿಯರು 180 ದಿನಗಳ ಶಿಶುಪಾಲನಾ ರಜೆಯ ಸೌಲಭ್ಯಕ್ಕೆ ಅರ್ಹರಾಗತಕ್ಕದ್ದಲ್ಲ. ಬುದ್ಧಿಮಾಂದ್ಯ/ಅಂಗವಿಕಲ ಮಕ್ಕಳನ್ನು ಹೊಂದಿದ್ದು, 730 ದಿನಗಳ ಶಿಶುಪಾಲನ ರಜೆ ಸೌಲಭ್ಯಕ್ಕೆ ಅರ್ಹರಾದ ಮಹಿಳಾ ಶಿಕ್ಷಕಿಯರನ್ನು ಹೊರತುಪಡಿಸಿ ಉಳಿದ ರಾಜ್ಯದ ಎಲ್ಲಾ ಅರ್ಹ ಮಹಿಳಾ ಶಿಕ್ಷಕಿಯರಿಗೆ 180 ದಿನಗಳ ಶಿಶುಪಾಲನಾ ರಜೆಯ ಸೌಲಭ್ಯವು ಅನ್ವಯವಾಗುತ್ತದೆ.

ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಶೇ.50 ಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಶಿಕ್ಷಕಿಯರು ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಒಂದೇ ಶಾಲೆಯಲ್ಲಿ ಒಬ್ಬರಿಗಿಂತ ಹೆಚ್ಚಿನ ಶಿಕ್ಷಕಿಯರು ಶಿಶುಪಾಲನಾ ರಜೆ ಮಂಜೂರಾತಿ ಕೋರಿದಲ್ಲಿ ಅಥವಾ ಮಂಜೂರು ಮಾಡಿದಲ್ಲಿ ಶೈಕ್ಷಣಿಕ ಕಾರ್ಯಗಳಿಗೆ ಅಡಚಣೆಯಾಗುವುದರಿಂದ ಈ ಬಗ್ಗೆ ಮಾರ್ಗದರ್ಶನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 187 ಪಿಬಿಎಸ್ 2021**

**ಬೆಂಗಳೂರು, ದಿನಾಂಕ:17/11/2021.**

ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಮಹಿಳಾ ನೌಕರರಿಗೆ ಸರ್ಕಾರದ ಆದೇಶ ಸಂಖ್ಯೆ:ಆಇ 4(ಇ) ಸೇನಿಸೇ 2021 ಬೆಂಗಳೂರು, ದಿನಾಂಕ:21-06-2021 ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರಿಗೆ ಕೆಲವೊಂದು ಷರತ್ತಿಗೊಳಪಟ್ಟು ಇಡೀ ಸೇವಾವಧಿಯಲ್ಲಿ ಗರಿಷ್ಠ 6 ತಿಂಗಳ ವರೆಗೆ ಅಂದರೆ 180 ದಿನಗಳ ಶಿಶುಪಾಲನಾ ರಜೆಯನ್ನು ಮಂಜೂರು ಮಾಡಲು ಅನುಮತಿಸಲಾಗಿದ್ದು, ಶಿಕ್ಷಣ ಇಲಾಖೆಯ ಶಿಕ್ಷಕಿಯರು ಒಂದೇ ಶಾಲೆಯಲ್ಲಿ ಒಬ್ಬರಿಗಿಂತ ಹೆಚ್ಚಿನ ಶಿಕ್ಷಕಿಯರು ಶಿಶುಪಾಲನಾ ರಜೆ ಮಂಜೂರಾತಿ ಕೋರಿ ಅರ್ಜಿ ಸಲ್ಲಿಸಿದಲ್ಲಿ, ಈ ಕೆಳಕಂಡ ಮಾರ್ಗ ಸೂಚಿಯನ್ನು ಅನುಸರಿಸಿ, ಇತ್ಯರ್ಥಪಡಿಸುವಂತೆ ಆದೇಶಿಸಿದೆ.

1. ಒಂದು ಶಾಲೆಯಲ್ಲಿ 2 ಅಥವಾ 2ಕ್ಕಿಂತ ಹೆಚ್ಚು ಮಹಿಳಾ ಶಿಕ್ಷಕರು ರಜೆ ಕೋರಿ ಅರ್ಜಿ ಸಲ್ಲಿಸಿದಲ್ಲಿ, ಅತ್ಯಂತ ಕಿರಿಯ ವಯಸ್ಸಿನ ಮಗುವಿನ ಶಿಕ್ಷಕಿಗೆ ಸೇವಾ ಪುಸ್ತಕದಲ್ಲಿ ಈಗಾಗಲೇ

Scanned with CamScanner

Scanned with CamScanner

ನಮೂದಿಸಿರುವ ಮಕ್ಕಳ ವಿವರಗಳ ಆಧಾರದ ಮೇಲೆ ರೊಟೇಷನ್ ಪದ್ದತಿಯಲ್ಲಿ ಆದ್ಯತೆಯ ಮೇಲೆ ಮಂಜೂರು ಮಾಡುವುದು. (ಪಾಳಿ ಪದ್ದತಿ)

2. ತಾಲ್ಲೂಕಿನಲ್ಲಿ ರಜೆ ಮಂಜೂರಾತಿ ಕೋರಿರುವ ಎಲ್ಲಾ ಅರ್ಜಿಗಳನ್ನು ಪ್ರಾಧಿಕಾರವು ಅರ್ಹತೆಯ ಆಧಾರದ ಮೇಲೆ ತೀರಾ ಅನಿವಾರ್ಯತೆ ಇರುವ ಹಾಗೂ ಪ್ರಕರಣಗಳ ಗಂಭೀರತೆಯನ್ನು ಪರಿಗಣಿಸಿ, ಆದ್ಯತೆಯ ಮೇಲೆ ಮಂಜೂರಾತಿಗೆ ಕ್ರಮವಹಿಸುವುದು.
3. ಸದರಿ ಸೌಲಭ್ಯವನ್ನು ಹಕ್ಕು ಎಂಬುದಾಗಿ ಪರಿಗಣಿಸಿ, ಕ್ಲೇಮ್ ಮಾಡಲು ಅವಕಾಶವಿರುವುದಿಲ್ಲ. ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರದ (ಶೈಕ್ಷಣಿಕ ವ್ಯವಸ್ಥೆಗೆ ಧಕ್ಕೆಯಾಗದಂತೆ ಕ್ರಮವಹಿಸುವ ಷರತ್ತಿನೊಂದಿಗೆ) ಪೂರ್ವಾನುಮತಿ ಪಡೆದು ನಂತರವೇ ರಜೆಯನ್ನು ಉಪಯೋಗಿಸಿಕೊಳ್ಳುವುದು.
4. ಏಕೋಪಾಧ್ಯಾಯ ಶಾಲೆ/ ಶಿಕ್ಷಕರ ಕೊರತೆ ಇರುವ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಶಿಕ್ಷಕಿಯರು ಈ ರಜೆ ಸೌಲಭ್ಯವನ್ನು ಪಡೆಯಲು ಅರ್ಜಿ ಸಲ್ಲಿಸಿದಲ್ಲಿ ಮಂಜೂರಾತಿ ಸಕ್ಷಮ ಪ್ರಾಧಿಕಾರಿಗಳಾದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೂಕ್ತ ಪರ್ಯಾಯ ವ್ಯವಸ್ಥೆಯನ್ನು ಮಾಡಿದ ತರುವಾಯ ರಜೆ ಮಂಜೂರಾತಿಗೆ ಕ್ರಮವಹಿಸಬಹುದಾಗಿದೆ.
5. ಒಟ್ಟಾರೆ ಶಾಲೆಯ ಶೈಕ್ಷಣಿಕ ಹಿತಕ್ಕೆ ಧಕ್ಕೆಯಾಗದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ನಿಯಮಾನುಸಾರ ಮಂಜೂರಾತಿಗೆ ಕ್ರಮವಹಿಸುವುದು.
6. ಪ್ರತಿ ಬಾರಿಯೂ ಈ ರಜೆ ಮಂಜೂರಾತಿಯು ಕನಿಷ್ಠ 15 ದಿನಗಳು, ಗರಿಷ್ಠ 30 ದಿನಗಳು ಮೀರದಂತೆ ಇರಬೇಕು. (ಶೈಕ್ಷಣಿಕ ಹಿತದೃಷ್ಟಿಯಿಂದ)

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:FD EXP-8/2021 ದಿನಾಂಕ:09-11-2021ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಹೆಚ್. ಎಸ್. [signature] 12/11/2021

(ಹೆಚ್.ಎಸ್. ಶಿವಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
(ಪ್ರಾಥಮಿಕ ಶಿಕ್ಷಣ) ಶಿಕ್ಷಣ ಇಲಾಖೆ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ★ ಬೆಂಗಳೂರು ★

**ಇವರಿಗೆ:**

1. ಮಹಾಲೇಖಪಾಲರು (ಆ & ಇ), ಕರ್ನಾಟಕ, ಬೆಂಗಳೂರು.

Scanned with CamScanner
Scanned with CamScanner

2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ.

4. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

5. ನಿರ್ದೇಶಕರು(ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.

6. ರಾಜ್ಯದ ಎಲ್ಲಾ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳು. (ಆಯುಕ್ತರ ಮುಖಾಂತರ)

7. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.

8. ಅಧ್ಯಕ್ಷರು / ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಗಾಂಧಿನಗರ, ಬೆಂಗಳೂರು.

9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Scanned with CamScanner

Scanned with CamScanner